146ನೇ ಅಧಿವೇಶನ
ನಿ-330
ಕ್ರ-115 ಲಿಂಗರಾಜು
ಶಾಖೆ.

# ಮಾನ್ಯ ಕರ್ನಾಟಕ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ಕೆ.ಟಿ. ಶ್ರೀಕಂಠೇಗೌಡ, ಇವರ ನಿಯಮ 330ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.

**ವಿಷಯ:**

ರಾಜ್ಯದ 19 ವಿಶ್ವವಿದ್ಯಾಲಯಗಳಲ್ಲಿ ಸಾವಿರಾರು ಬೋಧಕರ ಹಾಗೂ ಬೋಧಕೇತರ ಹುದ್ದೆಗಳು ಖಾಲಿಯಿದ್ದು, ಇದರಿಂದ ವಿಶ್ವವಿದ್ಯಾಲಯಗಳ ಶೈಕ್ಷಣಿಕ ಚಟುವಟಿಕೆಗಳ ಹಾಗೂ ಆಡಳಿತ ಮೇಲೆ ದುಷ್ಪರಿಣಾಮ ಉಂಟಾಗಿದ್ದು, ಆದ್ದರಿಂದ ಈ ಹುದ್ದೆಗಳನ್ನು ಶೀಘ್ರವಾಗಿ ಭರ್ತಿ ಮಾಡಬೇಕೆಂಬುವ ವಿಷಯವನ್ನು ಮಾನ್ಯ ಉನ್ನತ ಶಿಕ್ಷಣ ಸಚಿವರಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

**ಸರ್ಕಾರದ ಉತ್ತರ:**

ಉನ್ನತ ಶಿಕ್ಷಣ ಇಲಾಖೆಯಡಿ ಬರುವ ವಿಶ್ವವಿದ್ಯಾಲಯಗಳಲ್ಲಿ ಪ್ರಸ್ತುತ ಬೋಧಕರ ಹಾಗೂ ಬೋಧಕೇತರ ಹುದ್ದೆಗಳು ಖಾಲಿಯಿದ್ದು, ಶೈಕ್ಷಣಿಕ ವ್ಯವಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ಅರ್ಹ ವಿದ್ಯಾರ್ಹತೆ ಹೊಂದಿದ ಅತಿಥಿ ಉಪನ್ಯಾಸಕರು/ತಾತ್ಕಾಲಿಕ ಉಪನ್ಯಾಸಕರಗಳನ್ನು ನೇಮಕ ಮಾಡಿಕೊಂಡು ವಿಶ್ವವಿದ್ಯಾಲಯದಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ.

ಬೋಧಕೇತರ ಹುದ್ದೆಗಳನ್ನು ಸರ್ಕಾರದ ಅಂಗಸಂಸ್ಥೆಯಾದ ಮೆ: ಕಿಯೋನಿಕ್ಸ್, ಬೆಂಗಳೂರು, ಇವರ ಮುಖಾಂತರ ಸೇವೆಯನ್ನು ಪಡೆದು ಶೈಕ್ಷಣಿಕ ಚಟುವಟಿಕೆಗಳನ್ನು ನಡೆಸುತ್ತಿರುವುದರಿಂದ, ವಿಶ್ವವಿದ್ಯಾಲಯಗಳ ಬೆಳವಣಿಗೆಗೆ, ಸಂಶೋಧನೆಗೆ ಹಾಗೂ ವಿದ್ಯಾರ್ಥಿಗಳ ಗುಣಾತ್ಮಕ ಶಿಕ್ಷಣಕ್ಕೆ ಯಾವುದೇ ತೊಂದರೆ ಉಂಟಾಗಿರುವುದಿಲ್ಲ.

ಮುಂದುವರೆದು, ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 02 ಬಿಇಎಂ 2021, ದಿನಾಂಕ: 24.11.2021ರನ್ವಯ ಕಲ್ಯಾಣ ಕರ್ನಾಟಕ ಭಾಗದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಅನುಷ್ಠಾನಗೊಳಿಸಲು ಅನುಕೂಲವಾಗುವಂತೆ ನೇರ ನೇಮಕಾತಿಯಡಿ ಬಾಕಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ: 06.07.2020 ರಿಂದ ವಿನಾಯಿತಿ ನೀಡಿದ್ದು, ಅದರನ್ವಯ ವಿಶ್ವವಿದ್ಯಾಲಯಗಳಿಂದ ಪ್ರಸ್ತಾವನೆ ಪಡೆದು ನಿಯಮಾನುಸಾರ ಪರಿಶೀಲಿಸಲು ಕ್ರಮವಹಿಸಲಾಗುತ್ತಿದೆ.

******************

**ಸಂಖ್ಯೆ: ಇಡಿ 108 ಯುಎನ್ಇ 2022**

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐಟಿ ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು